# ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/02/ಇಎಸ್‌ಟಿ(9)/2018/3175

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:25/02/2019.

## ಹಿಂಬರಹ

ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 9 ಹೈಕಕೋ 2019 ದಿನಾಂಕ:02/02/2019ರ ಪ್ರತಿಯನ್ನು ಲಗತ್ತಿಸಿ ಕಳುಹಿಸಿಕೊಡಲಾಗಿದೆ. ಈ ಸರ್ಕಾರದ ಸುತ್ತೋಲೆಯಲ್ಲಿ ತಿಳಿಸಿರುವ ಎಲ್ಲಾ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಈ ಕೆಳಕಂಡವರಿಗೆ ಸೂಚಿಸಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್‌ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ ಕೆ.ಜಿ.ಎಫ್.ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ಈ ನಿರ್ದೇಶನಾಲಯದ ಇ.ಎಸ್.ಟಿ.(1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ
4. ನಿರ್ದೇಶಕರ ಆಪ್ತ ಶಾಖೆಗೆ
5. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

18658

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 9 ಹೈಕಕೋ 2019

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 02.02.2019

## ಸುತ್ತೋಲೆ

ವಿಷಯ: ಸಂವಿಧಾನದ ಅನುಚ್ಛೇದ 371ಜೆ ಅಡಿ ಸ್ಥಳೀಯ ವ್ಯಕ್ತಿಗಳಿಗೆ ಮೀಸಲಾತಿ ಹುದ್ದೆಗಳನ್ನು ಬಾಹ್ಯಮೂಲದಿಂದ ಭರ್ತಿ ಮಾಡುವಾಗ ಅನುಸರಿಸಬೇಕಾದ ಕ್ರಮದ ಬಗ್ಗೆ-

ಉಲ್ಲೇಖ: ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈ-ಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ 2013.

JD(Ad)/ADO/Reg(Ad)

********

1. ಅನುಚ್ಛೇದ 371ಜೆ ಅಡಿಯಲ್ಲಿ ಸ್ಥಳೀಯ ವೃಂದದ ನೇರ ನೇಮಕಾತಿ ಹುದ್ದೆಗಳನ್ನು ಬಾಹ್ಯ ಮೂಲಗಳಿಂದಲೂ ಕೂಡ ಭರ್ತಿ ಮಾಡಿಕೊಳ್ಳಲು ಉಲ್ಲೇಖಿತ ಆದೇಶದ ಕಂಡಿಕೆ-10ರ ಉಪ ಕಂಡಿಕೆ (4) & (5) ರಲ್ಲಿ ಅವಕಾಶವನ್ನು ಕಲ್ಪಿಸಲಾಗಿದೆ. ಆದರೆ ಹಲವಾರು ಇಲಾಖೆಗಳು ಬಾಹ್ಯ (Outsourcing) ಮೂಲಗಳಿಂದ ಮಾನವ ಸಂಪನ್ಮೂಲ ಪಡೆಯಲು ಇ-ಟೆಂಡರ್‌ಗಳನ್ನು ಆಹ್ವಾನಿಸುವಾಗ ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವ್ಯಕ್ತಿಗಳಿಗೆ ಮೀಸಲಾದ ಹುದ್ದೆಗಳ ಎದುರಾಗಿ ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವ್ಯಕ್ತಿಗಳನ್ನೇ ಪೂರೈಸಬೇಕು ಎಂಬ ಷರತ್ತು ಇ-ಟೆಂಡರ್‌ಗಳಲ್ಲಿ ನಮೂದಿಸದೇ ಇರುವುದರಿಂದ ಮಾನವ ಸಂಪನ್ಮೂಲ ಪೂರೈಕೆದಾರರು ಸರಿಯಾಗಿ ಹೈದ್ರಾಬಾದ್-ಕರ್ನಾಟಕ ವ್ಯಕ್ತಿಗಳನ್ನು ಪೂರೈಸದೇ ಇರುವುದಾಗಿ ತಿಳಿದುಬಂದಿರುತ್ತದೆ.

2. ಮುಂದುವರೆದಂತೆ, ದಿನಾಂಕ:18.12.2018 ಮತ್ತು 19.12.2018 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಅನುಚ್ಛೇದ 371ಜೆ - ಕುರಿತ ಪ್ರಗತಿ ಪರಿಶೀಲನಾ ಸಭೆಯಲ್ಲಿ ಎಲ್ಲಾ ನೇಮಕಾತಿ ಪ್ರಾಧಿಕಾರಗಳು ಹೊರಗುತ್ತಿಗೆ ನೀಡುವಾಗ ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವ್ಯಕ್ತಿಗಳಿಗೆ ಮೀಸಲಾದ ಹುದ್ದೆಗಳಿಗೆ ಎದುರಾಗಿ ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವ್ಯಕ್ತಿಗಳನ್ನೇ ನೀಡುವಂತೆ ಇ-ಟೆಂಡರ್‌ಗಳಲ್ಲಿ ಷರತ್ತನ್ನು ವಿಧಿಸುವಂತೆ ನಿರ್ಣಯಿಸಲಾಗಿದೆ. ಮತ್ತು ಸದರಿ ನಡವಳಿಗಳನ್ನು ಸರ್ಕಾರದ ಎಲ್ಲಾ ಕಾರ್ಯದರ್ಶಿಗಳಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಲಾಗಿದೆ.

3. ಕಾರಣ, **ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವೃಂದದ ನೇರ ನೇಮಕಾತಿ ಹುದ್ದೆಗಳಿಗೆದುರಾಗಿ ಮಾನವ ಸಂಪನ್ಮೂಲವನ್ನು ಬಾಹ್ಯ(Outsourcing) ಮೂಲಗಳಿಂದ ಪಡೆಯುವಾಗ ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವ್ಯಕ್ತಿಗಳನ್ನೇ ಪೂರೈಕೆ ಮಾಡುವಂತೆ ಇ-ಟೆಂಡರ್‌ಗಳಲ್ಲಿ ಸೂಕ್ತ ಷರತ್ತನ್ನು ವಿಧಿಸಿ, ಜಾರಿಗೊಳಿಸುವಂತೆ ಎಲ್ಲಾ ಇಲಾಖೆಗಳ ನೇಮಕಾತಿ ಪ್ರಾಧಿಕಾರಿಗಳಿಗೆ ಸೂಚಿಸಲಾಗಿದೆ.**

(ಅಂಜುಂ ಪರ್ವೇಜ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಿಆಸು ಇಲಾಖೆ.

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.

2. ಎಲ್ಲಾ ಇಲಾಖಾ ಮುಖ್ಯಸ್ಥರು.
3. ಎಲ್ಲಾ ಪ್ರಾದೇಶಿಕ ಆಯುಕ್ತರು.
4. ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
5. ಆಡಳಿತಾಧಿಕಾರಿಗಳು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಅಡ್ಡರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು.
6. ಎಲ್ಲಾ ಜಿಲ್ಲಾಧಿಕಾರಿಗಳು.
7. ಎಲ್ಲಾ ನಿಗಮ/ಮಂಡಳಿಗಳ ಮುಖ್ಯಸ್ಥರುಗಳು.
8. ಶಿಕ್ಷಣ ಇಲಾಖೆಯ ಎಲ್ಲಾ ಹೆಚ್ಚುವರಿ ಆಯುಕ್ತರುಗಳು.
9. ಹೈದ್ರಾಬಾದ್-ಕರ್ನಾಟಕ ಪ್ರದೇಶದ ಎಲ್ಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರುಗಳು.
10. ಎಲ್ಲಾ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೋಲೀಸ್, ಈಶಾನ್ಯ ವಲಯ.
11. ಹೈದ್ರಾಬಾದ್-ಕರ್ನಾಟಕ ಪ್ರದೇಶದ ಎಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು.
12. ಎಲ್ಲಾ ವಿಶ್ವವಿದ್ಯಾಲಯಗಳ ಕುಲಸಚಿವರುಗಳು.
13. ಹೈದ್ರಾಬಾದ್-ಕರ್ನಾಟಕ ಪ್ರದೇಶದ ಎಲ್ಲಾ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು.
14. ಹೈದ್ರಾಬಾದ್-ಕರ್ನಾಟಕ ಪ್ರದೇಶದ ಎಲ್ಲಾ ಸಹಾಯಕ ಆಯುಕ್ತರುಗಳು.
15. ಕಾರ್ಯದರ್ಶಿ, ಹೈ-ಕ ಪ್ರದೇಶಾಭಿವೃದ್ಧಿ ಮಂಡಳಿ, ಗುಲ್ಬರ್ಗಾ.
16. ಹೆಚ್ಚುವರಿ ಪ್ರತಿ / ಶಾಖಾ ರಕ್ಷಾ ಕಡತ.